# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ರಾಷ್ಟ್ರಪತಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ

ದಿನಾಂಕ : DATE : 13/12/19

# ಪೌರತ್ವ ತಿದ್ದುಪಡಿ ಮಸೂದೆಗೆ ರಾಷ್ಟ್ರಪತಿ ಅಂಕಿತ

» ಅಸ್ಸಾಂನಲ್ಲಿ ಭುಗಿಲೆದ್ದ ಹಿಂಸೆಗೆ ಇಬ್ಬರು ಬಲಿ

» ಸಿಎಂ ಹಾಗೂ ಸಚಿವರಿಬ್ಬರ ಮನೆ ಮೇಲೆ ದಾಳಿ

ವಿ.ವಾ. 13/12/19



ನವದೆಹಲಿ: ಲೋಕಸಭೆ ಬಳಿಕ ಬುಧವಾರ ರಾಜ್ಯಸಭೆಯಲ್ಲೂ ಅಂಗೀಕಾರಗೊಂಡಿದ್ದ ಪೌರತ್ವ ತಿದ್ದುಪಡಿ ಮಸೂದೆಗೆ ಗುರುವಾರ ರಾತ್ರಿ ರಾಷ್ಟ್ರಪತಿ ರಾಮನಾಥ ಕೋವಿಂದ ಅವರ ಅಂಕಿತ ಬಿದ್ದಿದೆ. ಈ ಸಂಬಂಧ ಅಧಿಸೂಚನೆ ಹೊರಡಿಸಲಾಗಿದೆ. ಅದರೊಂದಿಗೆ ಮಸೂದೆ ಕಾಯ್ದೆಯಾಗಿ ಪರಿವರ್ತನೆ ಆಗಿದೆ. ಮತ್ತೊಂದೆಡೆ ಪೌರತ್ವ ತಿದ್ದುಪಡಿ ಮಸೂದೆ ಖಂಡಿಸಿ ಈಶಾನ್ಯ ರಾಜ್ಯಗಳಲ್ಲಿ ನಡೆಯುತ್ತಿರುವ ಪ್ರತಿಭಟನೆ ಗುರುವಾರ ಮತ್ತಷ್ಟು ಹಿಂಸಾರೂಪ ಪಡೆಯಿತು. ಪೊಲೀಸರು ಹಾಗೂ ಪ್ರತಿಭಟನಾಕಾರರ ನಡುವೆ ನಡೆದ ಘರ್ಷಣೆಯಲ್ಲಿ ಇಬ್ಬರು ಮೃತಪಟ್ಟಿದ್ದು, ಇನ್ನಿಬ್ಬರು ಗಂಭೀರವಾಗಿ ಗಾಯಗೊಂಡಿದ್ದಾರೆ. ಮತ್ತೊಂದೆಡೆ ದಿಬ್ರೂಗಢ ಜಿಲ್ಲೆಯಲ್ಲಿರುವ ಸಿಎಂ ಸರ್ಬಾನಂದ ಸೋನೋವಾಲ್ ಮತ್ತು ಕೇಂದ್ರ ಸಚಿವ ರಾಮೇಶ್ವರ್ ತೆಲಿ ಅವರ ಮನೆಗಳ ಮೇಲೆ ಕಲ್ಲು ತೂರಲಾಗಿದೆ. ಸೋನಿತ್‌ಪುರ ಜಿಲ್ಲೆಯಲ್ಲೂ ಸಚಿವ ರಣಜಿತ್ ಮನೆ ಮೇಲೆ ದುಷ್ಕರ್ಮಿಗಳು ದಾಳಿ ನಡೆಸಿದ್ದಾರೆ. ರಸ್ತೆ, ರೈಲು ಸಂಚಾರ ವ್ಯತ್ಯಯವಾಗಿದ್ದು, ಕೆಲವೆಡೆ ಕರ್ಫ್ಯೂ ಮುಂದುವರಿಸಲಾಗಿದೆ.

● ವಿವರ ಪುಟ 8